ಜೈನ ಮಂದಿರದಲ್ಲಿ ಮಹಾವೀರ ಜಯಂತಿ ಆಚರಣೆ

ಮೂಡಲಗಿ : ಮಹಾವೀರ ಜಯಂತಿ ಪ್ರಯುಕ್ತ ಜೈನ ಸಮುದಾಯದವರು ಪಟ್ಟಣದ ಭಗವಾನ 1008 ಮಹಾವೀರ ಜೈನ್ ಮಂದಿರದಲ್ಲಿ ಲೋಕಸಭಾ ಚುನಾವಣೆ ಹಿನ್ನಲೆ ಸರಳ ರೀತಿಯಲ್ಲಿ ಮಹಾವೀರ ಜಯಂತಿಯನ್ನು ರವಿವಾರದಂದು ಆಚರಿಸಿದರು.

ಜೈನ ಮಂದಿರದಲ್ಲಿ ಮಹಾವೀರರ ಭಾವಚಿತ್ರಕ್ಕೆ ಹೂವುಗಳಿಂದ ಪುಷ್ಪಾರ್ಚನೆ ಮಾಡಿ, ದೇವಸ್ಥಾನದ ಮೂರ್ತಿಗೆ ಪಂಡಿತ್ ರವೀಂದ್ರ ಉಪಾಧ್ಯ ಅವರು ವಿಶೇಷ ಪೂಜೆಯನ್ನು ಸಲ್ಲಿಸಿ, ಭಗವಾನ್ ಮಹಾವೀರರು ಬೋಧಿಸಿದ ಪಂಚಾಮೃತ ತತ್ವಗಳಾದ ಸತ್ಯ, ಅಹಿಂಸೆ, ಅಪರಿಗ್ರಹ, ಅಶೌರ್ಯ, ಬ್ರಹ್ಮಚಾರ್ಯ ತತ್ವಗಳನ್ನು ಸಾರಲಾಯಿತು. ನಂತರ ದೇವಸ್ಥಾನದ ಆವರಣದಲ್ಲಿ ಪಲಕ್ಕಿ ಉತ್ಸವ ಮಹಿಳೆಯರ ಕುಂಭ ಮೇಳದೊಂದಿಗೆ ಜರುಗಿತು.

ದಿಗಂಬರ ಜೈನ ಮಂದಿರದ ಟ್ರಸ್ಟ್‌ನ ಅಧ್ಯಕ್ಷ ವರ್ಧಮಾನ ಬೋಳಿ, ಡಾ. ಬಿ ಎಸ್ ಬಾಬನ್ನವರ, ಭರಮಪ್ಪ ಬಾಗೇವಾಡಿ, ಬಾಹುಮಲಿ ಜೇಕಿ, ರವಿ ಪಟ್ಟಣಶೆಟ್ಟಿ, ಸಮೇಶ ಉಂದ್ರಿ, ಶಿವಲಿಂಗ ಉಪ್ಪಿನ, ತವನಪ್ಪ ಜಿರಾಳೆ, ಸಂತೋಷ ಬೋಳಿ, ಮಹಾವೀರ ಸಲ್ಲಾಗೋಳ, ಪ್ರಕಾಶ ಉಂದ್ರಿ, ಪ್ರಮೋದ ಇಂಗ್ರೋಳಿ, ಜಯಪಾಲ ಮೂಲಡಗಿ, ಡಾ. ಪ್ರಶಾಂತ ಬಾಬನ್ನವರ, ಪ್ರಮೋದ ಪಾಟೀಲ ಇದ್ದರು.

ಕುಸನೂರರು ಒಂದು ಜ್ಞಾನಪರ್ವತವಾಗಿದ್ದರು : ಡಾ. ಕಾಟ್ಕರ್

ಬೆಳಗಾವಿ :- ಚಂದ್ರಕಾಂಥ ಕುಸನೂರ ಅವರು ಸಂಗೀತ, ಸಾಹಿತ್ಯ, ಚಿತ್ರಕಲಾ, ವೈಚಾರಿಕ ಹೀಗೆ ಎಲ್ಲ ಕ್ಷೇತ್ರಗಳಲ್ಲಿಯೂ ಆಳವಾದ ಜ್ಞಾನಯು ಳ್ಳವರಾಗಿದ್ದರು. ಅವರೊಂದು ಜ್ಞಾನ ಪರ್ವತವೇ ಆಗಿದ್ದರೆಂದರೆ ತಪ್ಪಾಗಲಾರದು. ಅಷ್ಟೇ ಅಲ್ಲದೇ ಅವರು ತಮ್ಮಲ್ಲಿರುವ ಜ್ಞಾನವನ್ನು ಬೇರೆಯವರೊಂದಿಗೆ ಹಂಚಿಕೊಳ್ಳಬೇಕೆಂಬ ವಿಶಾಲ ಮನಸ್ಸಿನವರಾಗಿದ್ದರು ಎಂದು ಹಿರಿಯ ಪತ್ರಕರ್ತ, ಲೇಖಕ ಡಾ. ಸರಜು ಕಾಟ್ಕರ್ ಇಂದಿಲ್ಲಿ ಹೇಳಿದರು.

ಚಂದ್ರಕಾಂತ ಕುಸನೂರ ಸಾಂಸ್ಕೃತಿಕ ಪ್ರತಿಷ್ಠಾನದವರು ಚೆನ್ನಮ್ಮ ವೃತ್ತದ ಬಳಿ ಇರುವ ಕನ್ನಡ ಸಾಹಿತ್ಯ ಭವನದಲ್ಲಿ ಇಂದು ದಿ. 21 ರವಿವಾರದಂದು ಮುಂಜಾನೆ 11 ಗಂಟೆಗೆ 'ಚಂದ್ರಕಾಂತ ಕುಸನೂರ : ನೆನಪು -2024' ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಡಾ. ಸರಜೂ ಕಾಟ್ಕರ್ ಮೇಲಿನಂತೆ ಹೇಳಿದರು.

ಮುಂದೆ ಮಾತನಾಡುತ್ತ ಡಾ. ಕಾಟ್ಕರ್, ಹಲವಾರು ವಿಷಯಗಳನ್ನು ಕಲಿತುಕೊಳ್ಳಬಹುದೆಂಬ ಜ್ಞಾನದಾಸೆಯಿಂದ ಆಗಾಗ ನಾವು ಅವರ ಮನೆಗೆ ಹೋಗುತ್ತಿದ್ದೆವು. ಕಾದಂಬರಿಕಾರ ಡಾ. ಬೈರಪ್ಪನವರು ಒಮ್ಮೆ ಬೆಳಗಾವಿಗೆ ಬಂದಿದ್ದಾಗ ಚಿತ್ರಕಲೆ ಕುರಿತು ಡಾ. ಭೈರಪ್ಪ ಮತ್ತು ಕೂಸನೂರರ ನಡೆದ ಆಳವಾದ ಚರ್ಚೆಯನ್ನು ನಾನೆಂದು ಮರೆಯಲಾರೆ. ಅದರ ಧ್ವನಿಮುದ್ರಣ ನನ್ನ ಹತ್ತಿರವಿದ್ದು ಅದು ಪುಸ್ತಕರೂಪದಲ್ಲಿ ಬರುವುದು ಅತ್ಯವಶ್ಯವಾಗಿದೆ ಎಂದು ಹೇಳದರು.

'ಕುಸನೂರರ ಚಿತ್ರಕಲೆಯ ರಸಾನುಭವ' ವಿಷಯ ಕುರಿತಂತೆ ಮಾತನಾಡಿದ ಖ್ಯಾತ ಬರಹಗಾರರಾದ ಡಾ.ಪಿ. ಜಿ. ಕೆಂಪಣ್ಣವರ ಅವರು, ಚಿತ್ರಕಲೆಯಲ್ಲಿ ಒಂದು ಸಾಂಪ್ರದಾಯಿಕ ಚಿತ್ರಕಲೆ ಇನ್ನೊಂದು ನವ್ಯಚಿತ್ರಕಲೆ. ಕುಸನೂರರು ನವ್ಯ ಮಾದರಿಯಲ್ಲಿ ಚಿತ್ರಗಳನ್ನು ಬಿಡಿಸುತ್ತಿದ್ದರಿಂದ ಅವು ಸಾಮಾನ್ಯ ಜನರಿಗೆ ತಿಳಿಯುತ್ತಿರಲಿಲ್ಲ. ನೋಡುಗನ ದೃಷ್ಟಿಕೋನದಂತೆ ಒಂದೇ ಚಿತ್ರ ಹಲವಾರು ಅರ್ಥಗಳನ್ನು ಹೇಳುತಿದ್ದವು. ಕುಸನೂರರು ಒಬ್ಬರು ಅದ್ಭುತ ಚಿತ್ರಕಲಾವಿದ ಎಂದು ಹೇಳಿದರು.

'ನಟನ ಅನುಭವ' ವಿಷಯ ಕುರಿತಂತೆ ರಂಗಕರ್ಮಿ ಶಿರೀಷ ಜೋಷಿ ಮಾತನಾಡಿ, ನನ್ನ ಅಭಿನಯದ ಪಯಣ ಪ್ರಾರಂಭವಾದುದೇ ಚಂದ್ರಕಾಂತ ಕುಸನೂರರ ನಾಟಕದಿಂದ. ಇವರ ನಾಟಕಗಳ ಹಿಂದಿನ ಭಾವಗಳು ಅಂದು ನನಗೆ ತಿಳಿದಿರಲೇ ಇಲ್ಲ. ಇವರ ಹೆಚ್ಚಿನ ಎಲ್ಲ ನಾಟಕಗಳಲ್ಲಿ ನಾನು ಅಭಿನಯಿಸಿದ್ದೇನೆ. ಇವರ ಒಡನಾಟವೇ ಒಂದು ರೀತಿ ಖುಷಿ ಕೊಡುತ್ತಿತ್ತು ಎಂದು ಹೇಳಿದರುನ್ನ

ಇದೇ ಸಂದರ್ಭದಲ್ಲಿ ಕರ್ನಾಟಕ ನಾಟಕ ಅಕಾಡಮಿ ಸದಸ್ಯರಾದ ಬಾಬಾಸಾಹೇಬ ಕಾಂಬಳೆಯವರನ್ನು ಸನ್ಮಾನಿಸಿ ಗೌರವಿಸಲಾಯಿತು.

'ನಿರ್ದೇಶಕನ ಅನುಭವಗಳು' ವಿಷಯ ಕುರಿತಂತೆ ನಿರ್ದೇಶಕ ಬಾಬಾಸಾಹೇಬ ಕಾಂಬಳೆ ಮಾತನಾಡಿದರು. ಪ್ರಾಸ್ತಾವಿಕ ನುಡಿಗಳನ್ನು ಸಂಚಾಲಕ ಬಿ.ಕೆ. ಕುಲಕರ್ಣಿ ಮಾತನಾಡಿದರು. ಮೀನಾಕ್ಷಿ ಸದಲಗೆ ವಂದಿಸಿದರು. ನಿರಜಾ ಗಣಚಾರಿ ನಿರೂಪಿಸಿದರು. ಖ್ಯಾತ ಕಲಾವಿದ ಬಾಳು ಸದಲಗೆ, ಡಾ. ರಾಮಕೃಷ್ಣ ಮರಾಠೆ, ಡಾ. ಎಸ್.ಬಿ. ಕುಲಕರ್ಣಿ, ರಾಮಚಂದ್ರ ಕಟ್ಟಿ, ಡಾ. ಎ. ಬಿ. ಘಾಟಗೆ, ರವಿ ಕೊಟಾರಗಸ್ತಿ, ಅರವಿಂದ ಹುನಗುಂದ ಶ್ರೀಮತಿ ಜ್ಯೋತಿ ಬದಾಮಿ ಉಪಸ್ಥಿತರಿದ್ದರು.

ಬಡವರ ಕಷ್ಟ ಕಾಂಗ್ರೆಸ್ ಗೆ ಮಾತ್ರ ಅರ್ಥವಾಗುತ್ತೆ : ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

ಬೆಳಗಾವಿ: ಕಾಂಗ್ರೆಸ್ ಸರ್ಕಾರದಿಂದ ಮಾತ್ರ ಬಡವರ ಏಳಿಗೆ ಸಾಧ್ಯ. ಬಡವರಿಗಾಗಿ ಹಲವು ಯೋಜನೆಗಳನ್ನು ಜಾರಿಗೆ ತಂದಿದ್ದು, ಭರಪೂರ ನೆರವು ನೀಡುತ್ತಿದೆ. ಬಡವರ ಕಷ್ಟ ಕಾಂಗ್ರೆಸ್ ಗೆ ಮಾತ್ರ ಅರ್ಥವಾಗುತ್ತದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಬೆಳಗಾವಿ ಉತ್ತರ ವಿಧಾನಸಭಾ ಕ್ಷೇತ್ರದ ವಂಟಮೂರಿ ಕಾಲೋನಿಯ ಜನತಾ ಬ್ಲಾಕ್ ನಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಪರ ಪ್ರಚಾರ ನಡೆಸಿದ ಸಚಿವರು, ಕಾಂಗ್ರೆಸ್ ಪಕ್ಷ ಬಡವರ ಪಕ್ಷ, ಬದ್ದತೆಗೆ ಹೆಸರಾಗಿರುವ ಪಕ್ಷ ಎಂದು ಹೇಳಿದರು. ಕಳೆದ ವರ್ಷ ವಿಧಾನ ಸಭೆ ಚುನಾವಣೆಗೂ ಮುನ್ನ ಕಾಂಗ್ರೆಸ್ ಪಕ್ಷ ಘೋಷಿಸಿದ್ದ ಪಂಚ ಗ್ಯಾರಂಟಿ ಯೋಜನೆಗಳನ್ನು ಅಧಿಕಾರಕ್ಕೆ ಬಂದ ಕೇವಲ 100 ದಿನಗಳಲ್ಲಿ ಜಾರಿಗೆ ತಂದಿತು. ಹಿಂದಿನ ಶಾಸಕ ಫಿರೋಜ್ ಸೇಠ್ ಶ್ರಮದ ಫಲವಾಗಿ ಇಂದು ವಂಟಮೂರಿ ಸಕಲ ರೀತಿಯಲ್ಲೂ ಅಭಿವೃದ್ಧಿ ಹೊಂದಿದೆ. ಮುಂದಿನ ದಿನಗಳಲ್ಲಿ ಮತ್ತಷ್ಟು ನೆರವು ನೀಡಲಾಗುವುದು. ಮೃಣಾಲ್ ಹೆಬ್ಬಾಳ್ಕರ್ ಎಂಪಿ ಆಗಿ ಆಯ್ಕೆಯಾದರೆ, ಶಾಸಕ ರಾಜು ಸೇಠ್ ಜೊತೆಗೂಡಿ ಈ ಏರಿಯಾಗಳನ್ನು ಮತ್ತಷ್ಟು ಅಭಿವೃದ್ಧಿಪಡಿಸುವರು ಎಂದು ಸಚಿವರು ಹೇಳಿದರು.

ಇದೇ ವೇಳೆ ಮಾತನಾಡಿದ ಶಾಸಕ ರಾಜು ಸೇಠ್, ಬೆಳಗಾವಿ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲ್ಲಬೇಕು. ಕಳೆದ ಐದು ಬಾರಿ ನಮಗೆ ಸೋಲುಂಟಾಗಿದ್ದು,ಈ ಬಾರಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಗೆಲುವು ಶತಸಿದ್ಧ ಎಂದರು. ಬಳಿಕ ಮಾತನಾಡಿದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್, ಈ ಬಾರಿ ಕಾಂಗ್ರೆಸ್ ಗೆಲುವಿಗೆ ಉತ್ತಮ ಅವಕಾಶವಿದ್ದು, ನಮ್ಮಗಳ ಸೇವೆ ಮಾಡಲು ಅವಕಾಶ ಮಾಡಿಕೊಡಬೇಕೆಂದು ಮನವಿ ಮಾಡಿದರು.

ಈ ವೇಳೆ ಮುಖಂಡರಾದ ಆರ್.ವಿ.ಪಾಟೀಲ್, ಜ್ಯೋತಿ ಬಾವಿಕಟ್ಟಿ, ಪುಷ್ಪ ಪರ್ವತರಾವ್, ಬೈಲ್ ಪತ್ತರ್ ಅಧ್ಯಕ್ಷರಾದ ಅಪ್ಪುಶಾ, ನಾಗೇಶ್, ಕಲ್ಲಪ್ಪ, ಶಾಂತಾ ಬಾಯಿ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

ಲೋಕಸಭೆ ಚುನಾವಣೆ: ಸಾಮಾನ್ಯ ವೀಕ್ಷಕರಿಂದ ಸಭೆ

ಚುನಾವಣಾ ಆಯೋಗದ ನಿರ್ದೇಶನದಂತೆ ಕಾರ್ಯನಿರ್ವಹಿಸಿ: ಹೇಮ ಪುಷ್ಪ ಶರ್ಮಾ

ಕೊಪ್ಪಳ, ಏಪ್ರಿಲ್ : ಚುನಾವಣಾ ಕಾರ್ತವ್ಯಕ್ಕೆ ನಿಯೋಜಿಸಲ್ಪಟ್ಟ ಎಲ್ಲಾ ಅಧಿಕಾರಿಗಳು, ಸಿಬ್ಬಂದಿ ಹಾಗೂ ಎಲ್ಲಾ ತಂಡಗಳು ಭಾರತ ಚುನಾವಣಾ ಆಯೋಗದ ನಿರ್ದೇಶನಗಳಂತೆ ಕಾರ್ಯನಿರ್ವಹಿಸಬೇಕು ಎಂದು ಕೊಪ್ಪಳ ಲೋಕಸಭಾ ಕ್ಷೇತ್ರದ ಚುನಾವಣಾ ಸಾಮಾನ್ಯ ವೀಕ್ಷಕರಾದ ಹೇಮ ಪುಳ್ಳ ಶರ್ಮಾ(ಐ.ಎ.ಎಸ್) ಅವರು ಹೇಳಿದರು. ಲೋಕಸಭೆ ಚುನಾವಣೆ-2024ರ ಹಿನ್ನೆಲೆಯಲ್ಲಿ ವಿವಿಧ ವಿಳಯಗಳ ಕುರಿತು ಚರ್ಚಿಸಲು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶನವಾರ ಹಮ್ಮಿಕೊಳ್ಳಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಎಲ್ಲಾ ಮತಗಟ್ಟೆಗಳಲ್ಲಿ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ವಿದ್ಯುತ್, ಶೌಚಾಲಯ, ರ್‍ಯಾಂಪ್ ಸೇರಿದಂತೆ ಇತರ ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕು. ಸೂಕ್ಷ್ಮ ಮತಗಟ್ಟೆಗಳಿಗೆ ಹೆಚ್ಚಿನ ಗಮನ ಹರಿಸಬೇಕು. ಇಂದು ನಾನು 16 ಮತಗಟ್ಟೆಗಳಿಗೆ ಭೇಟಿ ನೀಡಿದ್ದು, ಅಲ್ಲಿ ಅಗತ್ಯ ವ್ಯವಸ್ಥೆಗಳನ್ನು ಕಲ್ಪಿಸಿರುವುದು ಸಂತಸ ತಂದಿದೆ ಎಂದರು. ಜಿಲ್ಲಾ ಸ್ವೀಪ್ ಸಮಿತಿಯಿಂದ ಮತದಾನದ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವ ಬಗ್ಗೆ ಮಾಹಿತಿ ಪಡೆದ ಸಾಮಾನ್ಯ ವೀಕ್ಷಕರು, ನಯಮಿತವಾಗಿ ಅರಿವು ಕಾರ್ಯಕ್ರಮಗಳನ್ನು ಕೈಗೊಂಡು ಮತದಾನ ಹೆಚ್ಚಳಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು. ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಅವರು ಮಾತನಾಡಿ, ಕೊಪ್ಪಳ ಜಿಲ್ಲೆಯಲ್ಲಿ 7 ತಾಲ್ಲೂಕುಗಳು, 21 ಹೋಬಳಿ, 595 ಜನವಸತಿ ಗ್ರಾಮಗಳು, 9 ನಗರ ಸ್ಥಳೀಯ ಸಂಸ್ಥೆಗಳು, 153 ಗ್ರಾಮ ಪಂಚಾಯತ್‌ಗಳು, 5 ವಿಧಾನಸಭಾ ಕ್ಷೇತ್ರಗಳು, 1 ಜಿಲ್ಲಾ ಪಂಚಾಯತ್ ಹಾಗೂ 7 ತಾಲ್ಲೂಕು ಪಂಚಾಯಿತಿಗಳಿದ್ದು, 1,317 ಮತಗಟ್ಟೆಗಳಿವೆ. ಇದರ ಜೊತೆಗೆ 8-ಕೊಪ್ಪಳ ಲೋಕಸಭಾ ಕ್ಷೇತ್ರಕ್ಕೆ ರಾಯಚೂರು ಜಿಲ್ಲೆಯ ಸಿಂಧನೂರು ಮತ್ತು ಮಸ್ಕಿ ಹಾಗೂ ಬಳ್ಳಾರಿ ಜಿಲ್ಲೆಯ ಸಿರಗುಪ್ಪ ವಿಧಾನಸಭಾ ಕ್ಷೇತ್ರಗಳು ಒಳಪಡುತ್ತದೆ. 8-ಕೊಪ್ಪಳ ಲೋಕಸಭಾ ಕ್ಷೇತ್ರದಲ್ಲಿ ಒಟ್ಟು 2,045 ಮತಗಟ್ಟೆಗಳಿವೆ ಎಂದು ಅವರು ತಿಳಿಸಿದರು.ಎಂಟು ವಿಧಾನಸಭಾ ಕ್ಷೇತ್ರಗಳಿಗೆ ತಲಾ ಒಬ್ಬರಂತೆ ಮತ್ತು ಅಪರ ಜಿಲ್ಲಾಧಿಕಾರಿಗಳು ಸೇರಿ ಒಟ್ಟು 9 ಜನರನ್ನು ಸಹಾಯಕ ಚುನಾವಣಾಧಿಕಾರಿಗಳನ್ನಾಗಿ ನೇಮಕ ಮಾಡಲಾಗಿದೆ. ಚುನಾವಣೆಗೆ ಸಂಬಂಧಿಸಿದಂತೆ ದೂರು ಸ್ವೀಕರಿಸಲು ಜಿಲ್ಲಾಡಳಿತ ಭವನದಲ್ಲಿ ಕಂಟ್ರೋಲ್ ರೂಮ್ ಪ್ರಾರಂಭಿಸಲಾಗಿದೆ. ಅದಲ್ಲದೆ ಚುನಾವಣಾ ವೆಚ್ಚ ವೀಕ್ಷಣಾ ತಂಡ, ಕಂಪ್ಲೇಂಟ್ ಮಾನಟರಿಂಗ್ ಸೆಲ್, ಮೀಡಿಯಾ ಸರ್ಟಿಫಿಕೇಷನ್ ಮತ್ತು ಮಾನಟರಿಂಗ್ ಕಮಿಟಿ, ಎಂಸಿಸಿ ಸೆಲ್ ಹಾಗೂ ಇತರ ತಂಡಗಳು ಕಾರ್ಯನಿರ್ವಹಿಸುತ್ತಿವೆ. ಮಾದರಿ ನೀತಿ ಸಂಹಿತೆ ಜಾರಿ ಹಿನ್ನೆಲೆಯಲ್ಲಿ ಚೆಕ್‌ಪೋಸ್ಟ್, 49 ಫ್ಲೈಯಿಂಗ್ ಸ್ಕ್ವಾಡ್ಸ್, 24 ಎಸ್.ಎಸ್.ಟಿ ಹಾಗೂ ಇತರ ತಂಡಗಳನ್ನು ನೇಮಕ ಮಾಡಿದ್ದು ಎಲ್ಲಾ ತಂಡಗಳು ಸಹ ಈಗಾಗಲೇ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿವೆ ಎಂದು ಚುನಾವಣಾ ಸಿದ್ಧತೆಗಳು ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ವಿವರಿಸಿದರು.ಜಿಲ್ಲೆಯಲ್ಲಿ ತೆರೆದಿರುವ ಚೆಕ್‌ಪೋಸ್ಟ್, ಎಸ್.ಎಸ್.ಟಿ., ವಿ.ಎಸ್.ಟಿ., ಎಫ್.ಎಸ್.ಟಿ.ಗಳು, ಮತಗಟ್ಟೆಗಳು, ಮತದಾನ ಕಾರ್ಯಕ್ಕೆ ನೇಮಕಗೊಂಡ ಪಿ.ಆರ್.ಓ., ಎ.ಪಿ.ಆರ್.ಓ. ಹಾಗೂ ಪಿಓಗಳ ಬಗ್ಗೆ ಮಾಹಿತಿ ಪಡೆದ ಚುನಾವಣಾ ಸಾಮಾನ್ಯ ವೀಕ್ಷಕರಾದ ಹೇಮ ಪುಳ್ಳ ಶರ್ಮಾ ಅವರು ಜಿಲ್ಲಾಡಳಿತದ ಕ್ರಮಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.ಸಭೆಯಲ್ಲಿ ಎಂ.ಸಿ.ಸಿ ನೋಡಲ್ ಅಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ರತ್ನಂ ಪಾಂಡೆಯ, ಜಿಲ್ಲಾ ಪೊಲೀಸ್ ವರಿಳ್ಳಾಧಿಕಾರಿಗಳಾದ ಯಶೋಧಾ ವಂಟಗೋಡಿ, ಅಪರ ಜಿಲ್ಲಾ ಪೊಲೀಸ್ ವರಿಳ್ಳಾಧಿಕಾರಿಗಳಾದ ಹೇಮಂತ ಕುಮಾರ ಸೇರಿದಂತೆ ವಿಧಾನಸಭಾ ಕ್ಷೇತ್ರಗಳ ಸಹಾಯಕ ಚುನಾವಣಾಧಿಕಾರಿಗಳು, ವಿವಿಧ ತಂಡಗಳು, ಪೊಲೀಸ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಜಾನುವಾರುಗಳ ಆಕಸ್ಮಿಕ ಸಾವು: ಸ್ಥಳಕ್ಕೆ ಧಾವಿಸಿದ ಮೃಣಾಲ್ ಹೆಬ್ಬಾಳಕರ್

ಬೆಳಗಾವಿ: ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಸಂತಿ ಬಸ್ತವಾಡ ಗ್ರಾಮದ ಯಲ್ಲಪ್ಪ ಚಿನ್ನಕುಪ್ಪಿ ಅವರಿಗೆ ಸೇರಿದ 2 ಆಕಳು ಹಾಗೂ 5 ಕುರಿಗಳು ಮೇಯುವ ಸಂದರ್ಭದಲ್ಲಿ ಕ್ರಿಮಿನಾಶಕ ಮಿಶ್ರಿತ ನೀರು ಕುಡಿದ ಪರಿಣಾಮ ಸಾವಿಗೀಡಾಗಿದ್ದು, ಸುದ್ದಿ ತಿಳಿದ ತಕ್ಷಣ ಬೆಳಗಾವಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಸ್ಥಳಕ್ಕೆ ಧಾವಿಸಿದ್ದಾರೆ.

ಜಾನುವಾರುಗಳ ಮಾಲಿಕರಿಂದ ಸಂಪೂರ್ಣ ಮಾಹಿತಿ ಪಡೆದ ಮೃಣಾಲ ಹೆಬ್ಬಾಳಕರ್, ಸೂಕ್ತ ಪರಿಹಾರ ಒದಗಿಸಲು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು. ಜೊತೆಗೆ ಸಂಬಂಧಿಸಿದ ಅಧಿಕಾರಿಗಳಿಗೆ ಕರೆ ಮಾಡಿ, ನಯಮಾನುಸಾರ ಜಾರುವಾರುಗಳ ಮಾಲಿಕರಿಗೆ ನೆರವು ನೀಡುವಂತೆ ಕೋರಿದರು.

ಸ್ಥಳದಿಂದಲೇ ಕ್ಷೇತ್ರದ ಶಾಸಕಿಯೂ ಆಗಿರುವ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿ ಮಾಹಿತಿ ನೀಡಿದ ಮೃಣಾಲ ಹೆಬ್ಬಾಳಕರ್, ಸಚಿವರು ಸಹ ಸರಕಾರದಿಂದ ಪರಿಹಾರ ಒದಗಿಸಲು ಕ್ರಮ ಕೈಗೊಳ್ಳಲಿದ್ದಾರೆ ಎಂದು ತಿಳಿಸಿದರು. ಇಂತಹ ಘಟನೆ ಮರುಕಳಿಸದಂತೆ ಎಚ್ಚರವಹಿಸುವಂತೆ ಮೃಣಾಲ ಹೆಬ್ಬಾಳಕರ್ ಜನರಲ್ಲಿ ವಿನಂತಿಸಿದರು.

ನೇಹಾ ಹಿರೇಮಠ ಹತ್ಯೆ ಖಂಡಿಸಿ ವಿವಿಧ ಸಂಘಟನೆಗಳಿಂದ ಪ್ರತಿಭಟನೆ

ಯರಗಟ್ಟಿ: ಸಮೀಪದ ಮುರಗೋಡ ಗ್ರಾಮದಲ್ಲಿ ಹುಬ್ಬಳ್ಳಿಯಲ್ಲಿ ವಿದ್ಯಾರ್ಥಿನಿ ನೇಹಾ ಹಿರೇಮಠ ಹತ್ಯೆ ಖಂಡಿಸಿ ವಿವಿಧ ಸಂಘಟನೆಗಳು ಪಟ್ಟಣದಲ್ಲಿ ರಸ್ತೆ ತಡೆದು ಬೃಹತ್ ಪ್ರತಿಭಟನೆ ನಡೆಸಿದವು. ಮುರಗೋಡ ಮಹಾಂತ ಅಜ್ಜನವಮಠದ ನೀಲಕಂಠ ಶ್ರೀಗಳು ಮಾತನಾಡಿ, ನೇಹಾ ಹಿರೇಮಠಳನ್ನು ಬರ್ಬರವಾಗಿ ಹತ್ಯೆ ಮಾಡಿದ ಫಯಾಜ್‌ಗೆ ಗಲ್ಲು ಶಿಕ್ಷೆ ವಿಧಿಸಬೇಕೆಂದು ಒತ್ತಾಯಿಸಿದರು.

ಹಿಂದು ಕಾರ್ಯಕರ್ತರು, ವಿದ್ಯಾರ್ಥಿಗಳನ್ನು ಒಂದೇ ಕೋಮಿನ ಯುವಕರು ಕೊಲೆ ಮಾಡುತ್ತಿರುವುದು ದುರದೃಷ್ಟಕರ ಸಂಗತಿ. ಸರ್ಕಾರ ಪರಿಗಣಿಸಿ ಶೀಘ್ರ ಕೊಲೆಗಾರರಿಗೆ ಗಲ್ಲು ಶಿಕ್ಷೆ ಕೊಡಿಸಬೇಕು.

ಕಠಿಣ ಕಾನೂನು ರೂಪಿಸಬೇಕು ಎಂದು ಮನವಿ ಮಾಡಿದರು. ಕರವೇ ಅಧ್ಯಕ್ಷ ಉದಯಕುಮಾರ ಚಿಕ್ಕಣ್ಣವರ, ವಿವಿಧ ಸಂಘಟನೆಗಳ ಅಧ್ಯಕ್ಷ ಮಹಾಂತೇಶ ಬಡಿಗೇರ, ತಾಪಂ ಸದಸ್ಯ ಮಾಜಿ ಸುರೇಶ ಮ್ಯಾಕಲ, ಗುರುಮಹಾಂತೇಶ ಹಿರೇಮಠ, ಚಿದಂಬರ ಮೇಟಿ ಮಾತನಾಡಿದರು. ಪಟ್ಟಣದಲ್ಲಿ ಪ್ರತಿಭಟನಾ ಮೆರವಣಿಗೆ ನಡೆಸಿ, ಮಾನವ ಸರಪಳಿ ನಿರ್ಮಿಸಿ ರಸ್ತೆ ತಡೆದು ಪ್ರತಿಭಟಿಸಲಾಯಿತು. ಸ್ವಯಂಪ್ರೇರಿತವಾಗಿ ಅಂಗಡಿ ಮುಂಗಟ್ಟು ಮುಚ್ಚಲಾಗಿತ್ತು. ಆರೋಪಿ ಫಯಾಜ್ ಪ್ರತಿಕೃತಿಗೆ ಬೆಂಕಿ ಹಚ್ಚಿ ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನಾ ಸ್ಥಳಕ್ಕೆ ಬಂದ ಉಪತಹಸೀಲ್ದಾರ್ ಡಿ. ಬಿ. ಅಲ್ಲಯ್ಯನವರಮಠ, ಕಂದಾಯ ನಿರೀಕ್ಷಕ ಎಸ್. ಎಸ್. ಪಾಟೀಲ ಅವರು ಮನವಿ ಸ್ವೀಕರಿಸಿದರು. ಕುಮಾರ ಪೂಜೇರಿ, ಮಹೇಶ ಹಿರೇಮಠ, ಫಯುಮ್ ಬಾಗೇವಾಡಿ, ಮಲಿಕ್ ಸುಲ್ತಾನಬಾಯಿ, ಶಿವಲಿಂಗಯ್ಯ ಹಿರೇಮಠ, ಕಿರಣ ಸಂಪಗಾವಿ,ಆದಿತ್ಯಾ ಬಾಳಿಕಾಯಿ, ಮಂಜು ಬಿಳ್ಳೂರ, ಪ್ರವೀಣ ಬೆ